ಕರ್ನಾಟಕ ಸರ್ಕಾರ

ಸಂಖ್ಯೆ: ಪಪೂಶಿ/ಆವಿಎ/ವಿನಿ3/ಪ್ರಾಬಡ್ತಿ/02/2020-21(ಭಾಗ-2)

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು - 560 012.
ದಿನಾಂಕ: 28-12-2021.

ಜ್ಞಾಪನ

ವಿಷಯ:- ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ಸ್ಥಾನಪನ್ನ ಬಡ್ತಿ ಹೊಂದಿರುವ ಉಪನ್ಯಾಸಕರುಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿಗೊಳಿಸುವ ಬಗ್ಗೆ.

ಉಲ್ಲೇಖ:- ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 8 ಡಿಜಿಡಿ 2021 ದಿ: 30.10.2021 ಮತ್ತು 27/12/2021.

* * * * *

ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಉಪನ್ಯಾಸಕ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಸ್ಥಾನಪನ್ನ ಬಡ್ತಿ ಹೊಂದಿರುವವರಿಗೆ ಜೇಷ್ಠತಾ ಪಟ್ಟಿಯಂತೆ ಪ್ರಾಂಶುಪಾಲರ ಹುದ್ದೆಯಲ್ಲಿ ಸ್ಥಳ ನಿಯುಕ್ತಿಗಾಗಿ ಕೌನ್ಸೆಲಿಂಗ್‌ನ್ನು ***ದಿನಾಂಕ: 30.12.2021 ರಂದು ಮಧ್ಯಾಹ್ನ 3:00 ರಿಂದ 6.00 ಗಂಟೆಗೆಯವರೆಗೆ ಈ ಕೆಳಗಿನ ವಿಡಿಯೋ ಕಾನ್ಫರೆನ್ಸ್ ZOOM ತಂತ್ರಾಂಶದ ಮೂಲಕ*** ನಡೆಸಲಾಗುವುದು.

ZOOM MEETING LINK https://us02web.zoomus/j/85774948721?pwd=c05HWEpxR043amhkSTF3TE5TT1ZvZz09

MEETING LOGIN ID: 85774948721 PASSWORD: 918121 **ಕಡ್ಡಾಯವಾಗಿ ಜಿಲ್ಲಾ ಉಪ ನಿರ್ದೇಶಕರು ಮಾತ್ರ ಉಪಯೋಗಿಸಲು ಸೂಚಿಸಿದೆ.**

ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ಹುದ್ದೆಗೆ ಪದನ್ನೂತಿ ಹೊಂದಿರುವ ಉಪನ್ಯಾಸಕರು ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರತಿ ಜಿಲ್ಲಾ ಉಪನಿರ್ದೇಶಕರ ಕಚೇರಿಯಲ್ಲೇ ಕೌನ್ಸಿಲಿಂಗ್ ಪ್ರಕ್ರಿಯೆಗೆ ಹಾಜರಾಗಿ ಕಡ್ಡಾಯವಾಗಿ ಸ್ಥಳ ಆಯ್ಕೆಯನ್ನು ಮಾಡಿಕೊಳ್ಳತಕ್ಕದ್ದು. ***ತಪ್ಪಿದಲ್ಲಿ ನಿಮಗೆ ನೀಡಿರುವ ಬಡ್ತಿಯನ್ನು ರದ್ದುಗೊಳಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.*** ಪ್ರಾಚಾರ್ಯರ ವೃಂದಕ್ಕೆ ಸ್ಥಾನಪನ್ನ ಬಡ್ತಿ ಹೊಂದಿರುವ ಉಪನ್ಯಾಸಕರ ಪಟ್ಟಿಯನ್ನು ಇಲಾಖೆಯ ಅಂತರ್ಜಾಲ www.pue.kar.nic.in ದಲ್ಲಿ Bulletin Board Link ನಲ್ಲಿ ಅಳವಡಿಸಲಾಗಿದೆ.

**ಕೌನ್ಸಿಲಿಂಗ್‌ಗೆ ಸಂಬಂಧಿಸಿದ ಸೂಚನೆಗಳು:**

1. ಇಲಾಖೆಯಿಂದ ನೀಡಿರುವ ಗುರುತಿನ ಚೀಟಿ/ಪತ್ರ ಮತ್ತು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಕಾಲೇಜಿನ ಪ್ರಾಂಶುಪಾಲರಿಂದ ನಿಮ್ಮ ಇತ್ತೀಚಿನ ಭಾವಚಿತ್ರವನ್ನು ಅಂಟಿಸಿ ದೃಢೀಕರಿಸಿದ ಸೇವಾ ದೃಢೀಕರಣ ಪತ್ರ.
2. **ಖಾಲಿಯಿರುವ ಎ ಬಿ & ಸಿ ವಲಯದಲ್ಲಿನ ವಿದ್ಯಾರ್ಥಿಗಳ ಸಂಖ್ಯೆ 200ಕ್ಕಿಂತ ಹೆಚ್ಚು ಇರುವ ಪ್ರಾಂಶುಪಾಲರ ಹುದ್ದೆಗಳಿಗೆ ಮಾತ್ರ ಕೌನ್ಸಿಲಿಂಗ್ ನಡೆಸಲಾಗುವುದು.**
3. ಕೌನ್ಸಿಲಿಂಗ್‌ಗೆ ಹಾಜರಾಗಿ ಸ್ಥಳ ಆಯ್ಕೆ ಮಾಡಿಕೊಂಡ ನಂತರ ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.
4. ಕಲ್ಯಾಣ-ಕರ್ನಾಟಕ ಪ್ರಾದೇಶಿಕ ರಾಜ್ಯವ್ಯಾಪಿ ಸ್ಥಳೀಯ ವೃಂದದಲ್ಲಿ ಬಡ್ತಿ ಹೊಂದಿರುವ ಉಪನ್ಯಾಸಕರು ಕಲ್ಯಾಣ-ಕರ್ನಾಟಕ ಪ್ರದೇಶದ ಹಾಗೂ ಬಿ.ಬಿ.ಎಂ.ಪಿ ವ್ಯಾಪಿಯಲ್ಲಿನ ಸ್ಥಳೀಯ ವೃಂದದ ಶೇಕಡ 8 ರಷ್ಟು ಪ್ರಾಂಶುಪಾಲರ ಖಾಲಿ ಹುದ್ದೆಗಳನ್ನು ಮಾತ್ರ ಆಯ್ಕೆ ಮಾಡಿಕೊಳ್ಳುವುದು.

"ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ,

ಜಂಟಿ ನಿರ್ದೇಶಕರು(ಆಡಳಿತ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಇವರಿಗೆ,

ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗೆ ಸ್ಥಾನಪನ್ನ ಬಡ್ತಿ ಹೊಂದಿರುವ ಉಪನ್ಯಾಸಕರುಗಳಿಗೆ.

Scanned by CamScanner

**ಪ್ರತಿ:**

1. ನಿರ್ದೇಶಕರ ಆಪ್ತಶಾಖೆ, ಜಂಟಿ ನಿರ್ದೇಶಕರು (ಆಡಳಿತ), ಉಪನಿರ್ದೇಶಕರು (ಆಡಳಿತ) ಇವರಿಗೆ.
2. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಕಳುಹಿಸುತ್ತಾ ನಿಮ್ಮ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಬಡ್ತಿ ಹೊಂದಿರುವ ಎಲ್ಲಾ ಉಪನ್ಯಾಸಕರುಗಳಿಗೆ ಕೌನ್ಸೆಲಿಂಗ್‌ಗೆ ಹಾಜರಾಗಲು ಕಡ್ಡಾಯವಾಗಿ ತಿಳಿಸತಕ್ಕದ್ದು.
3. ಸಂಬಂಧಿಸಿದ ಎಲ್ಲಾ ಕಾಲೇಜಿನ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಮತ್ತು ಕ್ರಮಕ್ಕೆ -ಅಂತರ್ಜಾಲದ ಮೂಲಕ.
4. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇಲಾಖೆಯ ಅಂತರ್ಜಾಲದಲ್ಲಿ ಅಳವಡಿಸಲು ಹಾಗೂ ಕೌನ್ಸೆಲಿಂಗ್ ಕಾರ್ಯಕ್ಕೆ ಬೇಕಾದ ಕಾರ್ಯ ಸಿದ್ಧತೆ ಮತ್ತು ತಂತ್ರಾಂಶ ವ್ಯವಸ್ಥೆಯನ್ನು ಅಗತ್ಯವಾಗಿ ಸಿದ್ಧಪಡಿಸಿಟ್ಟುಕೊಳ್ಳತಕ್ಕದ್ದು.
5. ಕಚೇರಿ ಪ್ರತಿ.

Scanned by CamScanner

**ಕರ್ನಾಟಕ ಸರ್ಕಾರ**

ಸಂಖ್ಯೆ:ಪಪೂಶಿಇ/ಆವಿ-3/ವಿ.ನಿ-3/ಪ್ರಾ.ಬಡ್ತಿ/2020-21(ಭಾಗ-2 )

ನಿರ್ದೇಶಕರ ಕಛೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
ಮಲ್ಲೇಶ್ವರಂ, 18ನೇ ಅಡ್ಡರಸ್ತೆ,
ಬೆಂಗಳೂರು-560012.
ದಿನಾಂಕ: 30-12-2021.

# ಒಪ್ಪಿಗೆ ಪತ್ರ

ಪದವಿ ಪೂರ್ವ ಶಿಕ್ಷಣ ಇಲಾಖೆಯ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಪ್ರಾಂಶುಪಾಲರ ವೃಂದದ ಹುದ್ದೆಗೆ ಬಡ್ತಿ ಮೂಲಕ ಪದೋನ್ನತಿ ಹೊಂದಿರುವ ಶ್ರೀಮತಿ/ಶ್ರೀ ______________________________, ಉಪನ್ಯಾಸಕರು, ಸರ್ಕಾರಿ ಪದವಿ ಪೂರ್ವ ಕಾಲೇಜು, _________________________________ _____________ತಾ. ______________ ಜಿಲ್ಲೆ, ಕಾಲೇಜು ಸಂಕೇತ ಸಂಖ್ಯೆ:_________ಅನ್ನು ಆದ ನಾನು ಸ್ವ-ಇಚ್ಛೆಯಿಂದ ಸರ್ಕಾರಿ ಪದವಿ ಪೂರ್ವ ಕಾಲೇಜು,_____________________ತಾ.________________ ಜಿಲ್ಲೆ, ಕಾಲೇಜು ಸಂಕೇತ ಸಂಖ್ಯೆ:_________ ಇಲ್ಲಿಗೆ ಕೌನ್ಸಲಿಂಗ್ ಮೂಲಕ ಆಯ್ಕೆ ಮಾಡಕೊಂಡಿರುತ್ತೇನೆ. ಸ್ಥಳ ಬದಲಾವಣೆಗಾಗಿ ಇಲಾಖೆಯನ್ನಾಗಲೀ ಅಥವಾ ಸರ್ಕಾರವನ್ನಾಗಲೀ ಕೋರುವುದಿಲ್ಲವೆಂದು ಈ ಮೂಲಕ ದೃಢೀಕರಿಸುತ್ತೇನೆ.

ಉಪ ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಉಪನ್ಯಾಸಕರ ಹೆಸರು ಮತ್ತು ಸಹಿ
ಮೊಬೈಲ್ ಸಂಖ್ಯೆ:

Scanned by CamScanner